**All India Radio: Bangalore**
**National Bulletin In Kannada**
**22.02.2025  13.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**22.02.2025  13.10 p.m.**

**<><><><>**

ಮುಖ್ಯಾಂಶಗಳು

1. ಮಾರಿಷಸ್‌ನ ೫೭ನೇ ರಾಷ್ಟ್ರೀಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ
2. ವಿಕಸಿತ ಭಾರತ ಸಾಕಾರಕ್ಕೆ ಕೃಷಿ ವಲಯದ ಸಹಕಾರ ಅಗತ್ಯ - ಕೇಂದ್ರ ಸಚಿವ ಶಿವರಾಜ್ ಸಿಂಗ್ ಚವ್ಹಾಣ್
3. ಫೆಬ್ರವರಿ ೨೦೨೧ರ ಕದನ ವಿರಾಮ ಒಪ್ಪಂದದ ಮುಂದುವರಿಕೆಗೆ ಭಾರತ - ಪಾಕಿಸ್ತಾನ ಸಮ್ಮತಿ
4. ಮನ್ ಕಿ ಬಾತ್‌ನ ೧೧೯ನೇ ಆವೃತ್ತಿಯಲ್ಲಿ ನಾಳೆ ದೇಶದ ಜನತೆಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತು
5. ಐಸಿಸಿ ಚಾಂಪಿಯನ್ಸ್ ಟ್ರೋಫಿ: ಲಾಹೋರ್‌ನಲ್ಲಿಂದು ಆಸ್ಟ್ರೇಲಿಯಾ-ಇಂಗ್ಲೆಂಡ್ ಮುಖಾಮುಖಿ

<><><><>

ಮಾರಿಷಸ್‌ನ ೫೭ ನೇ ರಾಷ್ಟ್ರೀಯ ದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಮಾರಿಷಸ್ ಪ್ರಧಾನಿ ನವೀನ್ ರಾಮ್‌ಗೂಲಮ್ ಸಂಸತ್ತನ್ನುದ್ದೇಶಿಸಿ ಮಾತನಾಡುತ್ತಾ ಈ ವಿಷಯ ತಿಳಿಸಿದ್ದಾರೆ. ಅಂತಹ ವಿಶಿಷ್ಟ ವ್ಯಕ್ತಿಯ ಆತಿಥ್ಯ ವಹಿಸುವುದು ಮಾರಿಷಸ್‌ಗೆ ಒಂದು ದೊಡ್ಡ ಸೌಭಾಗ್ಯ ಎಂದು ಅವರು ತಿಳಿಸಿದ್ದಾರೆ. ಭಾರತ ಮತ್ತು ಮಾರಿಷಸ್ ನಡುವೆ ಬಲವಾದ ಮತ್ತು ಸ್ಥಿರ ಸಂಬಂಧವಿದ್ದು, ಭಾರತದ ಪ್ರಧಾನಿ ನರೇಂದ್ರ ಮೋದಿಯವರನ್ನು ಸ್ವಾಗತಿಸುವ ಮಹತ್ವವನ್ನು ಅವರು ಒತ್ತಿ ಹೇಳಿದರು ನರೇಂದ್ರ ಮೋದಿ ಅವರು, ಮಾರಿಷಸ್ ನ ವಿಶೇಷ ಅತಿಥಿಯಾಗಲು ಒಪ್ಪಿಕೊಂಡಿದ್ದಾರೆ ಎಂದು ರಾಮ್‌ಗೂಲಮ್ ಹೇಳಿದರು. ಪ್ರಧಾನಿ ಮೋದಿ ಅವರ ಇತ್ತೀಚಿನ ಪ್ಯಾರಿಸ್ ಮತ್ತು ಅಮೆರಿಕ ಪ್ರವಾಸಗಳ ಬಳಿಕ ಮಾರಿಷಸ್ ನೀಡುತ್ತಿರುವ ಈ ಭೇಟಿ, ಉಭಯ ದೇಶಗಳ ನಡುವಿನ ಸಂಬಂಧದ ಮಹತ್ವವನ್ನು

ಪ್ರತಿಪಾದಿಸುತ್ತದೆ. ಮಾರಿಷಸ್ ಪ್ರತಿ ವರ್ಷ ಮಾರ್ಚ್ ೧೨ ರಂದು ತನ್ನ ರಾಷ್ಟ್ರೀಯ ದಿನವನ್ನು ಆಚರಿಸುತ್ತದೆ. ಕಳೆದ ವರ್ಷ ಮಾರಿಷಸ್‌ನ ರಾಷ್ಟ್ರೀಯ ದಿನಾಚರಣೆಯಲ್ಲಿ ಮುಖ್ಯ ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅತಿಥಿಯಾಗಿ ಭಾಗವಹಿಸಿದ್ದರು.

<><><>

ನವದೆಹಲಿಯಲ್ಲಿಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಪುಸಾ ಕೃಷಿ ವಿಜ್ಞಾನ ಮೇಳ-೨೦೨೫ಕ್ಕೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶವನ್ನು ವಿಕಸಿತ ಭಾರತವಾಗಿಸುವ ಅಭಿಯಾನ ಮುಂದುವರಿದಿದೆ. ಹಾಗೆಯೇ ವಿಕಸಿತ ಭಾರತ ಕೃಷಿ ವಲಯ ಹಾಗೂ ರೈತರ ಸಹಕಾರವಿಲ್ಲದೆ ಸಾಧ್ಯವಿಲ್ಲ. ಇಂದೂ ಕೂಡ ಕೃಷಿ ದೇಶದ ಆರ್ಥಿಕತೆಯ ಬೆನ್ನೆಲುಬಾಗಿದೆ ಎಂದು ಹೇಳಿದರು.

ಧ್ವನಿ : ಶಿವರಾಜ್ ಸಿಂಗ್ ಚೌಹಾಣ್ (೧೬ ಸೆಕೆಂಡ್ಸ್)

ಉನ್ನತ ಕೃಷಿ - ವಿಕಸಿತ ಭಾರತ ಎಂಬುದು ಮೂರು ದಿನಗಳ ಈ ಮೇಳದ ವಿಷಯವಾಗಿದೆ. ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ ಅಭಿವೃದ್ಧಿಪಡಿಸಿರುವ ವಿವಿಧ ತಂತ್ರಜ್ಞಾನ ಹಾಗೂ ಕೃಷಿ ಸಂಬಂಧಿ ವ್ಯವಸ್ಥೆಗಳ ನೇರ ಪ್ರಾತ್ಯಕ್ಷಿಕೆಗಳು ಈ ಮೇಳದ ಆಕರ್ಷಣೆಯಾಗಿದೆ. ಈ ಮೇಳದಲ್ಲಿ ಸಾರ್ವಜನಿಕರಿಗೆ, ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ, ಕೃಷಿ ವಿಜ್ಞಾನ ಕೇಂದ್ರಗಳು, ರೈತ ಉತ್ಪಾದಕ ಸಂಸ್ಥೆಗಳು, ಉದ್ಯಮಿಗಳು ಹಾಗೂ ನವೋದ್ಯಮಿಗಳು ಪ್ರದರ್ಶಿಸುವ ತಂತ್ರಜ್ಞಾನ ಉತ್ಪನ್ನಗಳನ್ನು ವೀಕ್ಷಿಸಲು ಅವಕಾಶ ಒದಗಿಸಲಾಗಿದೆ. ಇದರ ಜತೆಗೆ ಹವಾಮಾನ - ನಿರೋಧಕ ಕೃಷಿ, ಬೆಳೆ ವೈವಿಧ್ಯೀಕರಣ, ಡಿಜಿಟಲ್ ಕೃಷಿ ಹಾಗೂ ಮಹಿಳೆಯರು ಮತ್ತು ಯುವಕರಿಗೆ ಉದ್ಯಮಶೀಲತೆ ಅಭಿವೃದ್ಧಿ ಕುರಿತ ವಿಷಯಗಳ ಬಗ್ಗೆ ರೈತ ವಿಜ್ಞಾನಿ ಸಂವಾದಾತ್ಮಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

<><><>

ಜಮ್ಮು ಮತ್ತು ಕಾಶ್ಮೀರದಲ್ಲಿ ಭಾರತ ಮತ್ತು ಪಾಕಿಸ್ತಾನ ಸೇನೆಗಳ ಪ್ರತಿನಿಧಿಗಳ ನಡುವೆ ಫೆಬ್ರವರಿ ೨೦೨೧ರ ಕದನ ವಿರಾಮ ಒಪ್ಪಂದವನ್ನು ಎತ್ತಿಹಿಡಿಯಲು ಮುಂದುವರೆಸಲು ಮತ್ತು ಭವಿಷ್ಯದಲ್ಲಿ ತಪ್ಪು ತಿಳುವಳಿಕೆಗಳನ್ನು ತಡೆಗಟ್ಟುವ ಕ್ರಮಗಳನ್ನು ಅನ್ವೇಷಿಸಲು ಒಮ್ಮತ ವ್ಯಕ್ತವಾಗಿದೆ. ನಿಯಂತ್ರಣ ರೇಖೆ - ಎಲ್‌ಒಸಿ ಮತ್ತು ಅಂತಾರಾಷ್ಟ್ರೀಯ ಗಡಿಯಲ್ಲಿ ಇತ್ತೀಚಿನ ಚಕಮಕಿ ಮತ್ತು

ಸುಧಾರಿತ ಸ್ಫೋಟಕ ವಸ್ತುಗಳ ಘಟನೆಗಳ ನಂತರ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಎರಡೂ ದೇಶಗಳ ಬ್ರಿಗೇಡ್ ಕಮಾಂಡರ್‌ಗಳು ಪೂಂಚ್ ಜಿಲ್ಲೆಯಲ್ಲಿ ಧ್ವಜ ಸಭೆ ನಡೆಸಿದರು. ೨೦೨೧ ಫೆಬ್ರವರಿ ೨೫ ರಂದು ನವೀಕರಿಸಲಾದ ಕದನ ವಿರಾಮ ಒಪ್ಪಂದವನ್ನು ಎತ್ತಿಹಿಡಿಯಲು ಒಪ್ಪಿಕೊಂಡ ಜೊತೆಗೆ, ಉದ್ವಿಗ್ನತೆಯನ್ನು ಕಡಿಮೆಗೊಳಿಸಲು ಸ್ಥಾಪಿತ ಸಂವಹನ ಮಾರ್ಗಗಳನ್ನು ಬಳಸಿಕೊಳ್ಳಲು ಬ್ರಿಗೇಡ್ ಕಮಾಂಡರ್‌ಗಳು ಸಹ ಒಪ್ಪಿಗೆ ಸೂಚಿಸಿದ್ದಾರೆ. ಗಡಿಯಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಿಕೊಳ್ಳುವಲ್ಲಿ ಕದನ ವಿರಾಮ ಒಪ್ಪಂದದ ಮಹತ್ವವನ್ನು ಎರಡೂ ಕಡೆಯವರು ಒತ್ತಿ ಹೇಳಿದ್ದಾರೆ. ನಾಲ್ಕು ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಪೂಂಚ್‌ನ ಚಕ್ಕನ್-ಡಾ-ಬಾಗ್ ಕ್ರಾಸಿಂಗ್ ಪಾಯಿಂಟ್‌ನಲ್ಲಿ ಉಭಯ ರಾಷ್ಟ್ರಗಳ ನಡುವೆ ನಡೆದ ಈ ಸಭೆ ಎಲ್‌ಒಸಿಯಲ್ಲಿ ಶಾಂತಿಯನ್ನು ಸ್ಥಾಪಿಸುವ ಕುರಿತಂತೆ ಮಹತ್ವ ಪಡೆದಿತ್ತು.

<><><>

ಭಾರತವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸಲಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ದೆಹಲಿ ವಿಶ್ವವಿದ್ಯಾಲಯದ ೧೦೧ನೇ ಘಟಿಕೋತ್ಸವವನ್ನುದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರೀಯ ಶಿಕ್ಷಣ ನೀತಿಯ ಅನುಷ್ಠಾನದ ಮೂಲಕ ೨೦೪೭ರ ವೇಳೆಗೆ ಭಾರತವನ್ನು ಅಭಿವೃದ್ಧಿಹೊಂದಿದ ರಾಷ್ಟ್ರವನ್ನಾಗಿಸಲು ಸಾಧ್ಯ. ದೇಶದ ಜನಸಂಖ್ಯೆಯಲ್ಲಿ ಶೇಕಡ ೬೦ರಷ್ಟು ಯುವಕರಿದ್ದಾರೆ. ಆದ್ದರಿಂದ ಪ್ರಧಾನಿ ನರೇಂದ್ರ ಮೋದಿ ಅವರ ವಿಕಸಿತ ಭಾರತದ ದೃಷ್ಟಿಕೋನವನ್ನು ಮುನ್ನಡೆಸುವಂತೆ ಯುವಕರಿಗೆ ಕರೆ ನೀಡಿದ್ದಾರೆ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ

ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ.

<><><>

ಭಾರತದ ಗೇಮಿಂಗ್ ಉದ್ಯಮ ವಿಶೇಷವಾಗಿ ಡಿಜಿಟಲ್ ಹಾಗೂ ಆನ್‌ಲೈನ್ ಗೇಮಿಂಗ್ ಗಮನಾರ್ಹ ಬೆಳವಣಿಗೆಯನ್ನು ಕಂಡಿದ್ದು, ದೇಶದ ಮಾಧ್ಯಮ ಮತ್ತು ಮನರಂಜನಾ ಕ್ಷೇತ್ರದಲ್ಲಿ ವೇಗವಾಗಿ ಬೆಳೆಯುತ್ತಿರುವ ವಲಯವಾಗಿದೆ. ಈ ಬೆಳವಣಿಗೆಗೆ ಪೂರಕವಾಗಿ ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಹಾಗೂ ಇಂಟರ‍್ಯಾಕ್ಟಿವ್ ಎಂಟರ್‌ಟೈನಮೆಂಟ್ ಅಂಡ್ ಇನೋವೇಶನ್ ಕೌನ್ಸಿಲ್ ಸಹಭಾಗಿತ್ವದಲ್ಲಿ ಆಯೋಜಿಸಿರುವ ಭಾರತ್ ಟೆಕ್ ಟ್ರಿಯಂಫ್ ಕಾರ್ಯಕ್ರಮ 'ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜ್'ನ ಮೊದಲನೇ ಆವೃತ್ತಿಯ ಭಾಗವಾಗಿದೆ. ಈ ಕಾರ್ಯಕ್ರಮ ಜಾಗತಿಕ ಅಂತಾರಾಷ್ಟ್ರೀಯ ವೇದಿಕೆಗಳಲ್ಲಿ ಭಾರತದ ಗೇಮಿಂಗ್ ಪ್ರತಿಭೆಗಳನ್ನು ಉತ್ತೇಜಿಸುವ ಗುರಿ ಹೊಂದಿದೆ. ಈ ಕಾರ್ಯಕ್ರಮ ಮೇ ೧ ರಿಂದ ೪ ರವರಗೆ ಮುಂಬೈನಲ್ಲಿ ನಡೆಯಲಿರುವ ವಿಶ್ವ ಧ್ವನಿ-ದೃಶ್ಯ ಮನರಂಜನಾ ಸಮ್ಮೇಳನ 'ವೇವ್ಸ್ ೨೦೨೫' ಹಾಗೂ ಗೇಮ್ ತಯಾರಕರ ಸಮ್ಮೇಳನದ ವೇಳೆ ಮುಕ್ತಾಯಗೊಳ್ಳಲಿದೆ.

<><><>

ಭಾರತೀಯ ಮೂಲದ ಕಾಶ್ ಪಟೇಲ್, ಅಮೆರಿಕದ ಫೆಡರಲ್ ಬ್ಯೂರೋ ಆಫ್ ಇನ್‌ವೆಸ್ಟಿಗೇಶನ್-ಎಫ್‌ಬಿಐನ ೯ನೇ ನಿರ್ದೇಶಕರಾಗಿ ಅಧಿಕೃತವಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಇದನ್ನು ಅವರು ತಮ್ಮ ಜೀವನದ ಶ್ರೇಷ್ಠ ಗೌರವ ಎಂದು ಬಣ್ಣಿಸಿದ್ದಾರೆ. ಕಾಶ್ ಪಟೇಲ್ ಕುರಿತು ಶ್ಲಾಘನೆ ವ್ಯಕ್ತಪಡಿಸಿರುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಆ ಸ್ಥಾನಕ್ಕೆ ಅವರು ಅತ್ಯುತ್ತಮ ಆಯ್ಕೆ ಎಂದು ಹೇಳಿದ್ದಾರೆ.

<><><>

೬ನೇ ಆವೃತ್ತಿಯ ಭಾರತ-ಜಪಾನ್ ಜಂಟಿ ಮಿಲಿಟರಿ ಸಮರಾಭ್ಯಾಸ 'ಧರ್ಮ ಗಾರ್ಡಿಯನ್'ಕ್ಕಾಗಿ ೧೨೦ ಸಿಬ್ಬಂದಿಯನ್ನು ಒಳಗೊಂಡ ಭಾರತೀಯ ಸೇನಾ ತುಕಡಿ ಇಂದು ಜಪಾನ್ ಗೆ ಪ್ರಯಾಣ ಬೆಳೆಸಿದೆ. ಇದೇ ೨೪ ರಿಂದ ಮಾರ್ಚ್ ೯ ರವರೆಗೆ ಜಪಾನ್‌ನ ಪೂರ್ವ ಫ್ಯೂಜಿ ತರಬೇತಿ ಪ್ರದೇಶದಲ್ಲಿ ಈ ಸಮರಾಭ್ಯಾಸ ನಡೆಯಲಿದೆ. ಜಂಟಿ ಯುದ್ಧ ಮತ್ತು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳನ್ನು ಕೈಗೊಳ್ಳುವ ಸಂದರ್ಭದಲ್ಲಿ ಉಭಯ ಪಡೆಗಳ ನಡುವೆ ಪರಸ್ಪರ

ಕಾರ್ಯಸಾಧ್ಯತೆಯನ್ನು ಹೆಚ್ಚಿಸುವುದು ಈ ಸಮರಾಭ್ಯಾಸದ ಉದ್ದೇಶವಾಗಿದೆ. ಇದು ಉನ್ನತ ಮಟ್ಟದ ದೈಹಿಕ ಸಾಮರ್ಥ್ಯ, ಜಂಟಿ ಯೋಜನೆ ಮತ್ತು ಜಂಟಿ ಯುದ್ಧತಂತ್ರದ ಕವಾಯತುಗಳ ಮೇಲೆ ಕೇಂದ್ರೀಕರಿಸುತ್ತದೆ. ಇದು ಭಾರತ ಮತ್ತು ಜಪಾನ್ ನಡುವಿನ ದ್ವಿಪಕ್ಷೀಯ ರಕ್ಷಣಾ ಸಹಕಾರವನ್ನು ಮತ್ತಷ್ಟು ಬಲಪಡಿಸುತ್ತದೆ.

<><><><>

ಭಾರತದಲ್ಲಿ ದೇಶೀಯ ವಿಮಾನ ಪ್ರಯಾಣಿಕರ ದಟ್ಟಣೆಯಲ್ಲಿ ಏರಿಕೆ ಮುಂದುವರಿದಿದ್ದು, ಜನವರಿಯಲ್ಲಿ ಅದು ೧೫೦.೩ ಲಕ್ಷಕ್ಕೆ ತಲುಪಿದೆ. ಇದು ಡಿಸೆಂಬರ್ ೨೦೨೪ಕ್ಕೆ ಹೋಲಿಸಿದರೆ, ಶೇಕಡ ೦.೭ರಷ್ಟು ಹೆಚ್ಚಳವಾಗಿದ್ದು, ಕಳೆದ ವರ್ಷದ ಜನವರಿಗೆ ಹೋಲಿಸಿದರೆ ಶೇಕಡ ೧೪.೫ರಷ್ಟು ಏರಿಕೆ ದಾಖಲಿಸಿದೆ.

<><><><>

ದೆಹಲಿ ಪೊಲೀಸ್ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಇಂದು ಬೆಳಿಗ್ಗೆ ಮಾದಕ ವಸ್ತುಗಳ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ, ಇಂಡಿಯಾ ಗೇಟ್‌ನ ಕರ್ತವ್ಯ ಪಥದಲ್ಲಿ ವಾಕಥಾನ್ ನಡೆಯಿತು. ದೆಹಲಿ ಪೊಲೀಸ್ ಆಯುಕ್ತ ಸಂಜಯ್ ಅರೋರಾ, ಒಲಿಂಪಿಕ್ ಬೆಳ್ಳಿ ಪದಕ ವಿಜೇತ ರವಿ ಕುಮಾರ್ ದಹಿಯಾ ಹಾಗೂ ಅರ್ಜುನ ಪ್ರಶಸ್ತಿ ವಿಜೇತ , ಕುಸ್ತಿ ಚಾಂಪಿಯನ್ ಸರಿತಾ ಮೋರ್ ವಾಕಥಾನ್‌ಗೆ ಚಾಲನೆ ನೀಡಿದರು.

<><><><>

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಮೇರಿಕಾದ ಅತ್ಯುನ್ನತ ಶ್ರೇಣಿ ಅಧಿಕಾರಿಯಾದ ಜನರಲ್ ಚಾರ್ಲ್ಸ್ ಸಿಕ್ಯೂ ಬ್ರೌನ್ ಅವರನ್ನು ನಿನ್ನೆ ರಾತ್ರಿ ವಜಾಗೊಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಟ್ರಂಪ್, ದೇಶಕ್ಕೆ ೪೦ ವರ್ಷಗಳಿಗೂ ಹೆಚ್ಚು ಕಾಲ ಸೇವೆ ಸಲ್ಲಿಸಿದ್ದಕ್ಕಾಗಿ ಜನರಲ್ ಚಾರ್ಲ್ಸ್ 'ಸಿಕ್ಯೂ' ಬ್ರೌನ್ ಅವರಿಗೆ ಧನ್ಯವಾದ ಅರ್ಪಿಸಿ, ಅವರ ಭವಿಷ್ಯಕ್ಕಾಗಿ ಶುಭ ಹಾರೈಸಿದ್ದಾರೆ.

<><><><>

ಪಾಕಿಸ್ತಾನದ ಲಾಹೋರ್‌ನಲ್ಲಿರುವ ಗದ್ದಾಫಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ ಬಿ ಗುಂಪಿನ ಪಂದ್ಯದಲ್ಲಿ ಆಸ್ಟ್ರೇಲಿಯಾ ಹಾಗೂ ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೨.೩೦ಕ್ಕೆ ಆರಂಭವಾಗಲಿದೆ. ಕರಾಚಿಯ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಬಿ ಗುಂಪಿನ ಪಂದ್ಯದಲ್ಲಿ ಅಫ್ಘಾನಿಸ್ತಾನ ವಿರುದ್ಧ ದಕ್ಷಿಣ ಆಫ್ರಿಕಾ ತಂಡ ೧೦೭ ರನ್‌ಗಳ ಭರ್ಜರಿ ಜಯ ದಾಖಲಿಸಿದೆ.

<><> **ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು** <><>